ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರ:2748/2015

ಚಾಸಾ:10 ಪ್ರಾಸಾ:5

ದಿನಾಂಕ: 12.09.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಮಯ್ಯದಿ |
| ತಂದೆಯ ಹೆಸರು | : | ಮೊಹಿದ್ದೀನ್ ಸಾಹೇಬ್ |
| ವಯಸ್ಸು | : | 60 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಕೋಟೇಶ್ವರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ದಿ: 26-01-2015 ಸ್ಥಳ ಹಾಗೂ ಸ್ವತ್ತು ಸ್ವಾಧೀನತಾ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಯನ್ನು ಈಗಾಗಲೇ ನಿಪಿ-6 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು ನಿಪಿ-6(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ ಮತ್ತು ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ. ಸಾಕ್ಷಿ ಮುಮಾ1 ರಿಂದ 8ನ್ನು ನೋಡಿ ಗುರುತಿಸಿಲ್ಲ. ಸಾಕ್ಷಿಗೆ ಒಂದು ಪೋಟೋ ತೋರಿಸಲಾಗಿ ಅದರಲ್ಲಿ ತನ್ನನ್ನು ನೋಡಿ ಗುರುತಿಸಿಲ್ಲ. ಮನೆಯ 6 ಪೋಟೊಗಳನ್ನು ನೋಡಿ ಗುರುತಿಸಿಲ್ಲ. ಸಾಕ್ಷಿ ನಿಪಿ-2ನ್ನು ನೋಡಿ ಗುರುತಿಸಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿಃ 26-01-2015 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ- 9 ರವರ ಸಮಕ್ಷಮ 11-30 ರಿಂದ 12-30 ರವರೆಗೆ ಪಂಚನಾಮೆ ಮತ್ತು ನಕ್ಷೆ ತಯಾರಿಸಿ ನಿಪಿ-2 ರಲ್ಲಿ ಕಂಡು ಬರುವ ವಾಹನವನ್ನು ಪರಿಶೀಲಿಸಿ ಮಾಲೀಕರಿಗೆ ಬಿಟ್ಟು ಕೊಟ್ಟು ಮನೆಯ ಛಾವಣಿ ಹಾಗೂ ಇತರೆ ಭಾಗಗಳನ್ನು ಜಖಂಗೊಳಿಸಿದ್ದ ಬಗ್ಗೆ ಪೋಟೋ ತೆಗೆದು ನಿಪಿ-6ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆ ವೇಳೆಗೆ ಮುಮಾ1 ರಿಂದ 8ನ್ನು ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**